ಆ) ಹಾಗಿದ್ದಲ್ಲಿ, ಮುಂದಿನ ಶೈಕ್ಷಣಿಕ ವರ್ಷದಿಂದ ಈ ಬಗ್ಗೆ ಯಾವ ತೀರ್ಮಾನವನ್ನು ಕೈಗೊಳ್ಳಲಾಗುವುದು ;

ಇ) ಹಾಗಿದ್ದಲ್ಲಿ, ಸರ್ಕಾರ ಇದರ ಸಾಧಕ ಬಾಧಕಗಳ ಬಗ್ಗೆ ಪರಿಶೀಲಿಸಿದೆಯೇ ;

ಈ) ಸರ್ಕಾರದ ಮೇಲ್ಕಂಡ ನಿರ್ಧಾರಕ್ಕೆ ಪರ ಮತ್ತು ವಿರೋಧವಾದ ಅಭಿಪ್ರಾಯಗಳು ವ್ಯಕ್ತವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

ಉ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಅಂತಿಮ ನಿಲುವೇನು ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮತ್ತು ತಂದೆ ತಾಯಂದಿರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು, 2007–08ನೇ ಸಾಲಿನಿಂದ ರಾಜ್ಯದ ಎಲ್ಲಾ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಯಿಂದ ಇಂಗ್ಲೀಷನ್ನು ಒಂದು ವಿಷಯವನ್ನಾಗಿ (ಎರಡನೇ ಭಾಷೆಯಾಗಿ) ಕಲಿಸಲು ದಿ. 20.10.2006ರ ಸರ್ಕಾರದ ಆದೇಶ ಸಂಖ್ಯೆ ಇಡಿ 37 ಪಿಜಿಸಿ 2003 ರನ್ವಯ ಆಸ್ಪದವನ್ನು ಕಲ್ಪಿಸಲಾಗಿದೆ.

43 (90) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ರಾಜ್ಯ ಸರ್ಕಾರವು ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟದ ಜೊತೆಗೆ ಮೊಟ್ಟೆಯನ್ನು ಕೊಡುವ ಬಗ್ಗೆ ತೀರ್ಮಾನಿಸಿದೆಯೇ;

ಆ) ಹಾಗದಿದ್ದಲ್ಲಿ, ರಾಜ್ಯ ಸರ್ಕಾರದ ನಿಲುವನ್ನು ವಿವಿಧ ಮಠಾಧೀಶರು ಹಾಗೂ ಬುದ್ಧಿಜೀವಿಗಳು ಮತ್ತು ಪ್ರಾಣಿದಯಾ ಸಂಘಟನೆಗಳು ವಿರೋಧ ಮಾಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

ಇ) ಈ ಕ್ರಮದಿಂದಾಗಿ ಶಾಲೆಗಳ ವಿದ್ಯಾರ್ಥಿಗಳಲ್ಲಿ ಸಸ್ಯಾಹಾರಿ ಮತ್ತು ಮಾಂಸಾಹಾರಿ ವರ್ಗೀಕರಣ ಮಾಡಿದಂತಾಗುವುದಿಲ್ಲವೇ ;

ಈ) ಹಾಗಿದ್ದಲ್ಲಿ, ಸರ್ಕಾರವು ಮೇಲ್ಕಂಡ ತೀರ್ಮಾನವನ್ನು ಪುನರ್ ಪರಿಶೀಲನೆ ಮಾಡುವುದೇ ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಆದೇಶ ಸಂಖ್ಯೆ: ಇಡಿ 66 ಎಂಎಂಎಸ್ 2006, ದಿ: 12.12.2006ರಂತೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಶಾಲಾ 1 ರಿಂದ

7ನೇ ತರಗತಿ ಮಕ್ಕಳಿಗೆ ಮಧ್ಯಾಹ್ನ ಬಿಸಿಯೂಟದ ಜೊತೆಗೆ ಒಂದು ಕೋಳಿ ಮೊಟ್ಟೆ / ಮೊಟ್ಟೆ ತಿನ್ನದವರಿಗೆ ಬಾಳೆಹಣ್ಣು ನೀಡುವ ಬಗ್ಗೆ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಲಾಗಿತ್ತು. ಈಗ ಅದಕ್ಕೆ ತಡೆಯಾಜ್ಞೆ ನೀಡಲಾಗಿದೆ.

ಆ)ಹೌದು.

ಇ) ಚರ್ಚೆಯ ಹಂತದಲ್ಲಿದೆ.

44 (92) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ರಾಜ್ಯದಲ್ಲಿ ಭಾಷಾ ನೀತಿಯನ್ನು ಉಲ್ಲಂಘನೆ ಮಾಡಿರುವ ಎಷ್ಟು ಪ್ರಕರಣಗಳು ಪತ್ತೆಯಾಗಿವೆ ; (ಶಾಲೆಯ ಹೆಸರು ಮತ್ತು ವಿವರಗಳನ್ನು ಜಿಲ್ಲಾವಾರು ಅಂಕಿ ಅಂಶಗಳಲ್ಲಿ ಒದಗಿಸುವುದು) ;

ಆ) ಈ ನೀತಿಯ ಉಲ್ಲಂಘನೆಗಾಗಿ ನಿಯಮಗಳಲ್ಲಿ ಯಾವ ರೀತಿಯ ಕ್ರಮಕ್ಕೆ ಅವಕಾಶವಿದೆ ;

ಇ) ಇದರ ಅನ್ವಯ ಸರ್ಕಾರ ಇಲ್ಲಿಯವರೆವಿಗೆ ಯಾವ ಶಿಸ್ತು ಕ್ರಮಗಳನ್ನು ಕೈಗೊಂಡಿದೆ (ಪೂರ್ಣ ವಿವರಗಳನ್ನು ಒದಗಿಸುವುದು) ;

ಈ) ಸರ್ಕಾರವು ಮುಂದಿನ ಶೈಕ್ಷಣಿಕ ವರ್ಷದಿಂದ ಭಾಷಾ ನೀತಿಯ ಉಲ್ಲಂಘನೆಯನ್ನು ಕಟ್ಟುನಿಟ್ಟಾಗಿ ತಡೆಗಟ್ಟಲು ಯಾವ ಕ್ರಮಗಳನ್ನು ಕೈಗೊಳ್ಳುವುದು ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 2698 (ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ).

ಆ) ಕರ್ನಾಟಕ ಶಿಕ್ಷಣ ಅಧಿನಿಯಮ, 1983ರ ಸೆಕ್ಷನ್ 34 ರನ್ವಯ ಭಾಷಾ ನೀತಿ ಉಲ್ಲಂಘನೆ ಮಾಡಿದ ಶಾಲೆಗಳ ನೋಂದಣಿ ಮತ್ತು ಸೆಕ್ಷನ್ 39 ರಡಿ ಮಾನ್ಯತೆ ಹಿಂಪಡೆಯಲು ಅಸ್ಪದ ಇರುತ್ತದೆ.

ಇ) ಉಲ್ಲಂಘನೆ ಮಾಡಿದ ಶಾಲೆಗಳಿಗೆ ನೋಟೀಸ್ ನೀಡಿ ಮಾನ್ಯತೆ ಹಿಂಪಡೆಯಲಾಗಿದೆ. (ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ).